# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1372 (1444)
2) ಸದಸ್ಯರ ಹೆಸರು : ಡಾ: ತಳವಾರ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)
3) ಉತ್ತರಿಸುವ ದಿನಾಂಕ : 20-03-2025
4) ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿಯಲ್ಲಿ ರಾಜ್ಯ ಮಾಹಿತಿ ಆಯೋಗದ ಕಲಬುರಗಿ ಪೀಠ ಇದ್ದು, ಇಲ್ಲದಂತಾಗಿರಲು ಕಾರಣಗಳೇನು; ಇದು ಜನರಿಗೆ ಉಪಯೋಗವಾಗುವಂತೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠವು ಕಲಬುರಗಿಯಲ್ಲಿ ದಿನಾಂಕ:01.01.2024 ರಿಂದ ಕಾರ್ಯಾರಂಭ ಮಾಡಿದ್ದು, ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಸಾರ್ವಜನಿಕರ ಅರ್ಜಿಗಳ ವಿಚಾರಣೆಯನ್ನು ಕೈಗೊಳ್ಳಲಾಗುತ್ತಿದೆ. |
| ಆ | ಕಲಬುರಗಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ಅಲ್ಲಿಯೇ ವಿಲೇವಾರಿಯಾಗುವಂತೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು; | ಕಲಬುರಗಿ ಪೀಠಕ್ಕೆ ಈಗಾಗಲೇ ಪೂರ್ಣ ಪ್ರಮಾಣದಲ್ಲಿ ಆಯುಕ್ತರನ್ನು ಮತ್ತು ಅಧಿಕಾರಿ / ಸಿಬ್ಬಂದಿಗಳೊಂದಿಗೆ ಕಾರ್ಯನಿರ್ವಹಿಸಲು ನೇಮಿಸಿ / ನಿಯೋಜಿಸಿ ಕ್ರಮಕೈಗೊಳ್ಳಲಾಗಿದೆ. |
| ಇ | ಕಲಬುರಗಿ ಈ ಪೀಠಕ್ಕೆ ಪೂರ್ಣ ಪ್ರಮಾಣದ ಆಯುಕ್ತರನ್ನು ನೇಮಿಸಿ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲ ಆಗುವಂತೆ ಸರ್ಕಾರ ಕ್ರಮವಹಿಸಬಹುದೆ; | ಕಲಬುರಗಿಯ ಪೀಠಕ್ಕೆ ಈಗಾಗಲೇ ಪೂರ್ಣ ಪ್ರಮಾಣದ ಆಯುಕ್ತರನ್ನು ನೇಮಕ ಮಾಡಲಾಗಿದೆ. |
| ಈ | ಕಲಬುರಗಿ ಪೀಠದಲ್ಲಿನ ಅಧಿಕಾರಿಗಳ/ ಸಿಬ್ಬಂದಿಗಳ ಗೊಂದಲ ಮತ್ತು ಒಳಜಗಳ ಕಾರಣದಿಂದ ಸಂವಿಧಾನದತ್ತ ಮಾಹಿತಿ ಹಕ್ಕನ್ನು ಪಡೆಯಲು ಈ ಭಾಗದ ಜನರಿಗೆ ಅವಕಾಶ ಕಲ್ಪಿಸಲು ಕೈಗೊಂಡ ಕ್ರಮಗಳೇನು? | ಕಲಬುರಗಿ ಪೀಠದಲ್ಲಿನ ಅಧಿಕಾರಿಗಳ / ಸಿಬ್ಬಂದಿಗಳ ಗೊಂದಲ ಮತ್ತು ಒಳಜಗಳ ಇರುವುದಿಲ್ಲ. ಸಂವಿಧಾನದತ್ತ ಮಾಹಿತಿ ಹಕ್ಕನ್ನು ಪಡೆಯಲು ಎಲ್ಲರಿಗೂ ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ. |

ಸಂಖ್ಯೆ: ಸಿಆಸುಇ (ಆಸು) 112 ಆರ್ ಟಿ ಐ 2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ.**